# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯಿತಿ ಕಟ್ಟಡದಲ್ಲಿ ಅಗತ್ಯತೆಯ ಹೆಚ್ಚುವರಿ ಕಾಮಗಾರಿಗಳನ್ನು ಕೈಗೊಂಡ ಬಿಲ್ ಬಾಬ್ತು ಪಾವತಿಸುವ ಬಗ್ಗೆ.

**ಓದಲಾಗಿದೆ:**

ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರ ಪತ್ರ ಸಂಖ್ಯೆ:ರಾಗ್ರಾಸಂ.ಆಡಳಿ(2)ಕಟ್ಟಡ.ಸಿಆರ್-10/2018-19 ದಿನಾಂಕ:31-08-2020.

**ಪ್ರಸ್ತಾವನೆ:**

ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯಿತಿ ಕಟ್ಟಡ, ಗಾಂಧಿನಗರ, ಬೆಂಗಳೂರು ಇಲ್ಲಿ ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರ ಮತ್ತು ಸ್ಯಾಟ್-ಕಾಂ ಉಪ ಕೇಂದ್ರವನ್ನು ಮರು ಸಂಸ್ಥಾಪಿಸಲು ಆದೇಶಿಸಲಾಗಿರುತ್ತದೆ. ಸದರಿ ಕಟ್ಟಡದಲ್ಲಿ ಜಲಾಮೃತ ಯೋಜನೆ ಕಛೇರಿ ಕಾರ್ಯನಿರ್ವಹಿಸುತ್ತಿದ್ದು, ಸದರಿ ಕಟ್ಟಡದಲ್ಲಿ ಅಗತ್ಯವಿರುವ ಹೆಚ್ಚುವರಿ ಕಾಮಗಾರಿಗಳಿಗೆ ಒಟ್ಟು ರೂ.52.62 ಲಕ್ಷಗಳ ಅಂದಾಜುಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡಿ ಕಾಮಗಾರಿಯನ್ನು ಕೈಗೊಳ್ಳಲು ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮಕ್ಕೆ ವಹಿಸಲಾಗಿರುತ್ತದೆ ಮತ್ತು ಸದರಿ ಕಟ್ಟಡದಲ್ಲೀ ರಾಜ್ಯ ಪಂಚಾಯತ್ ಸಂಪನ್ಮೂಲ ಕೇಂದ್ರವು ಕಾರ್ಯನಿರ್ವಹಿಸುತ್ತಿರುವುದರಿಂದ, ಸದರಿ ಕಟ್ಟಡದಲ್ಲಿ ಅಗತ್ಯವಿರುವ ಹೆಚ್ಚುವರಿ ಕಾಮಗಾರಿಗಳ ವೆಚ್ಚವನ್ನು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ವತಿಯಿಂದ ಭರಿಸಲು ತಿಳಿಸಲಾಗಿದ್ದ ಮೇರೆಗೆ ಉದ್ದೇಶಿತ ಕಾಮಗಾರಿಗೆ ಸಂಬಂಧಿಸಿದಂತೆ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮಕ್ಕೆ ಕಾಮಗಾರಿ ವಹಿಸಿರುವ ಬಗ್ಗೆ ಕಾರ್ಯಾದೇಶ ಪ್ರತಿ, ಆಡಳಿತಾತ್ಮಕ ಮಂಜೂರಾತಿ ನೀಡಿರುವ ಅಂದಾಜು ಪಟ್ಟಿ, ಅಂತಿಮ ಬಿಲ್, ಕಾಮಗಾರಿ ಮುಕ್ತಾಯ ಪ್ರಮಾಣ ಪತ್ರ ಮತ್ತು ಈ ಸಂಸ್ಥೆಯಿಂದ ಕಾಮಗಾರಿಯ ವೆಚ್ಚವನ್ನು ಭರಿಸಲು ತಿಳಿಸಿದ ಮೇರೆಗೆ ಭಾಗ-1ರ ಕಾಮಗಾರಿಯ ಅಂದಾಜು ಪಟ್ಟಿ ರೂ.47.97 ಲಕ್ಷಗಳು ಮತ್ತು ಭಾಗ-2ರ ಕಾಮಗಾರಿಯ ಅಂದಾಜುಪಟ್ಟಿ ರೂ.4.65 ಲಕ್ಷಗಳು ಹೀಗೆ ಒಟ್ಟು ರೂ.52.62 ಲಕ್ಷಗಳಿಗೆ ಆಡಳಿತಾತ್ಮಕ ಮಂಜೂರಾತಿ ಪ್ರತಿ, ಕಾಮಗಾರಿ ಮುಕ್ತಾಯ ಪ್ರಮಾಣ ಪತ್ರ ಮತ್ತು ಕಾಮಗಾರಿಗಳ ಅಂತಿಮ ಬಿಲ್ ಗಳ ಮೊತ್ತ (ಭಾಗ-1 ರೂ.47,65,525/- ಮತ್ತು ಭಾಗ-2 ರೂ.4,63,502/-) ಹೀಗೆ ಒಟ್ಟು ರೂ.52,29,027/- ಗಳನ್ನು ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮಕ್ಕೆ ಪಾವತಿಸಲು ತಿಳಿಸಲಾಗಿದ್ದು, ಅದರಂತೆ ಸದರಿ ವೆಚ್ಚವನ್ನು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ಸಾಂಸ್ಥಿಕ ಬೆಂಬಲದ ಅನುದಾನದಿಂದ ಪಾವತಿಸುವ ಬಗ್ಗೆ ಆದೇಶ ನೀಡುವಂತೆ ಮೇಲೆ ಓದಲಾದ ದಿನಾಂಕ:31-08-2020ರ ಪತ್ರದಲ್ಲಿ ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ದಿನಾಂಕ:31-08-2020ರ ಪತ್ರದೊಂದಿಗೆ ಸಲ್ಲಿಸಲಾದ ಪ್ರಸ್ತಾವನೆಯನ್ನು ಹಾಗೂ ದಾಖಲಾತಿಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದೆ. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರು ಕೋರಿರುವಂತೆ, ಬೆಂಗಳೂರು ಗ್ರಾಮಾಂತರ

ಜಿಲ್ಲಾ ಪಂಚಾಯಿತಿ ಕಟ್ಟಡದಲ್ಲಿ ಅಗತ್ಯತೆಯ ಹೆಚ್ಚುವರಿ ಕಾಮಗಾರಿಗಳನ್ನು ಕೈಗೊಂಡಿರುವ ಸಂಬಂಧ ಅಂದಾಜು ಪಟ್ಟಿಯಂತೆ ರೂ.52.62ಲಕ್ಷಗಳನ್ನು ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮಕ್ಕೆ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ಸಾಂಸ್ಥಿಕ ಬೆಂಬಲದ ಅನುದಾನದಿಂದ ಪಾವತಿಸುವ ಬಗ್ಗೆ ತೀರ್ಮಾನಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 333 ಜಿಪಸ 2020, ದಿನಾಂಕ:22-09-2020**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯಿತಿ ಕಟ್ಟಡ, ಗಾಂಧಿನಗರ, ಬೆಂಗಳೂರು ಇಲ್ಲಿ ಒಟ್ಟು ರೂ. 52.62 ಲಕ್ಷಗಳ ಅಂದಾಜು ಮೊತ್ತದಲ್ಲಿ ಹೆಚ್ಚುವರಿ ಕಾಮಗಾರಿಗಳನ್ನು ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ (KRIDL) ಸಂಸ್ಥೆಯು ನಿರ್ವಹಿಸಿದ್ದು, ಸದರಿ ಮೊತ್ತವನ್ನು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯು ಮುಂದಿನ ಕಾರ್ಯಕಾರಿ ಸಮಿತಿ ಸಭೆಯಲ್ಲಿ (EC) ಅನುಮೋದನೆ ಪಡೆಯುವ ಷರತ್ತಿಗೊಳಪಟ್ಟು ಸಾಂಸ್ಥಿಕ ಬೆಂಬಲದ ಅನುದಾನದಿಂದ ಪಾವತಿಸಲು ಆದೇಶಿಸಿದೆ.

ಈ ಆದೇಶವನ್ನು ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರ ಅಭಿಪ್ರಾಯ/ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 22/09/2020.
(ಬಿ.ನವೀನ್ ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.
4. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು.
5. ನಿರ್ದೇಶಕರು, ಜಲಾಮೃತ ಯೋಜನೆ, ಜಿಲ್ಲಾ ಪಂಚಾಯತ್, ಭವನ, 1ನೇ ಮಹಡಿ, ಕೆ.ಜಿ.ರಸ್ತೆ, ಗಾಂಧಿನಗರ, ಬೆಂಗಳೂರು-560009.

6. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
7. ಯೋಜನಾ ನಿರ್ದೇಶಕರು(ಖಜಾನೆ-2), ವಾಣಿಜ್ಯ ತೆರಿಗೆ ಇಲಾಖೆ ಕಟ್ಟಡ, 7ನೇ ಮಹಡಿ, ಗಾಂಧಿನಗರ, ಬೆಂಗಳೂರು.
8. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
9. ಕರ್ನಾಟಕ ವಿಕಾಸ ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು/ಇಲಾಖಾ ವೆಬ್ ಸೈಟ್‌ನಲ್ಲಿ ಅಳವಡಿಸಲು.
10. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ.

<u>ಪ್ರತಿಯನ್ನು ಮಾಹಿತಿಗಾಗಿ</u>::

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ನಿರ್ದೇಶಕರು(ಪಂ.ರಾಜ್-2), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.